# ಕರ್ನಾಟಕ ಸರ್ಕಾರದ ನಡವಳಿಗಳು

2587
13/9/13

**ವಿಷಯ:** ಮೆ: ರವಿ ಊರ್ಜಾ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ತತ್ವಶಃ ಅನುಮತಿ ನೀಡಿರುವ 23 ಮೆ.ವ್ಯಾ. ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 160 ಮೆ.ವ್ಯಾ.. ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಪತ್ರ ಸಂಖ್ಯೆ : ಇಎನ್ 94 ಎನ್‌ಸಿಇ 2012 ದಿನಾಂಕ : 22.9.2012

2) ಸರ್ಕಾರದ ಪತ್ರ ಸಂಖ್ಯೆ : ಇಎನ್ 126 ಎನ್‌ಸಿಇ 2013(2) ದಿನಾಂಕ : 02.8.2013.

3) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ: ಕೆಆರ್‌ಇಡಿ/08/RUWIPL-23 to 160 MW/ Belgaum/2013/1772 ದಿನಾಂಕ: 29.7.2013.

* * *

## ಪ್ರಸ್ತಾವನೆ:-

ಮೇಲೆ ಓದಲಾದ (1) ರ ಪತ್ರದಲ್ಲಿ ಮೆ:: ರವಿ ಊರ್ಜಾ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಕಕ್‌ಮರಿ, ಕಿಲಾರಹಟ್ಟಿ, ತೆಲಸಾಂಗ, ಐಗಳಿ, ರಾಮತೀರ್ಥ, ಪಡತರವಾಡಿ ಮತ್ತು ಬನ್ನೂರು ಗ್ರಾಮಗಳಲ್ಲಿ 23 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನಾ ಘಟಕ ಸ್ಥಾಪಿಸುವ ಬಗ್ಗೆ ವಿಸ್ತೃತ ಯೋಜನಾ ವರದಿಯನ್ನು ಒಂದು ವರ್ಷದೊಳಗೆ ತಯಾರಿಸಿ ಕೆಆರ್‌ಇಡಿಎಲ್‌ಗೆ ಸಲ್ಲಿಸುವ ಷರತ್ತಿಗೊಳಪಟ್ಟು ದಿನಾಂಕ 05.05.2012ರ ಹಂಚಿಕೆ ಸಮಿತಿಯ ನಿರ್ಣಯದಂತೆ ತತ್ವಶಃ ಅನುಮತಿಯನ್ನು ನೀಡಲಾಗಿತ್ತು. ತದನಂತರ, ಸದರಿ ಯೋಜನೆಯ ಕುರಿತ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಸಲ್ಲಿಸಲು ಎರಡು ವರ್ಷಗಳ ಕಾಲಾವಕಾಶವನ್ನು ವಿಸ್ತರಿಸಲು ಮೇಲೆ ಓದಲಾದ (2) ರ ಪತ್ರದಲ್ಲಿ ಅನುಮತಿ ನೀಡಲಾಗಿತ್ತು.

ಮೆ : ರವಿ ಊರ್ಜಾ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಕಕ್‌ಮರಿ, ಕಿಲಾರಹಟ್ಟಿ, ತೆಲಸಾಂಗ, ಐಗಳಿ, ರಾಮತೀರ್ಥ, ಪಡತರವಾಡಿ ಮತ್ತು ಬನ್ನೂರು ಗ್ರಾಮಗಳಲ್ಲಿ ಹಂಚಿಕೆಯಾಗಿರುವ 23.00 ಮೆ.ವ್ಯಾ. ಸಾಮರ್ಥ್ಯವನ್ನು 160.00 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಕುರಿತಂತೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಸಲ್ಲಿಸಿರುವುದಾಗಿ ತಿಳಿಸುತ್ತಾ, ಸದರಿ ಸಾಮರ್ಥ್ಯದ ಹೆಚ್ಚಳಕ್ಕೆ ಸಂಬಂಧಿಸಿದ ನಿಗಧಿತ ಶುಲ್ಕ ಪಾವತಿಸಿಕೊಂಡಿರುವುದಾಗಿ, ಈ ಯೋಜನೆಗೆ ಅವಶ್ಯಕವಾದ ಭೂಮಿಯು ಖಾಸಗಿ ಜಮೀನಾಗಿರುವುದಾಗಿ, ಉತ್ಪಾದನೆ ಆಗುವ ವಿದ್ಯುತ್ತನ್ನು ಸಂಬಂಧಿಸಿದ ವಿಸ್ಕಾಂನೊಂದಿಗೆ ವಿದ್ಯುತ್ ಖರೀದಿ ಒಪ್ಪಂದ ಮಾಡಿಕೊಳ್ಳುವ ಹಾಗೂ ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ 3ನೇ ಪಕ್ಷಗೆ ಮಾರಾಟ ಮಾಡುವ ಹಾಗೂ ಬಾಕಿ ಇರುವ ಡಿ.ಪಿ.ಆರ್. ಶುಲ್ಕವನ್ನು ಕೆ.ಆರ್.ಇ.ಡಿ.ಎಲ್‌ಗೆ ಪಾವತಿಸುವ ಷರತ್ತಿಗೊಳಪಟ್ಟು ಸಾಮರ್ಥ್ಯವನ್ನು 23.00 ಮೆ.ವ್ಯಾ.ದಿಂದ 160.00 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸಬಹುದೆಂದು ಮೇಲೆ ಓದಲಾದ (3)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 207 ಎನ್‌ಸಿಇ 2013,**
**ಬೆಂಗಳೂರು, ದಿನಾಂಕ: 26.08.2013**

ಸರ್ಕಾರದ ಪತ್ರ ಸಂಖ್ಯೆ : ಇಎನ್ 94 ಎನ್‌ಸಿಇ 2012 ದಿನಾಂಕ : 22.9.2012ರಲ್ಲಿ ಮೆ: ರವಿ ಊರ್ಜಾ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಕಕ್‌ಮರಿ, ಕಿಲಾರಹಟ್ಟಿ, ತೆಲಸಾಂಗ, ಐಗಳಿ, ರಾಮತೀರ್ಥ, ಪಡತರವಾಡಿ ಮತ್ತು ಬನ್ನೂರು ಗ್ರಾಮಗಳಲ್ಲಿ ತತ್ವಶಃ ಅನುಮೋದನೆ ನೀಡಿರುವ 23.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 160.00 ಮೆ.ವ್ಯಾ.ಗೆ ಹೆಚ್ಚಿಸಿ, ಈ ಕೆಳಗಿನ ಷರತ್ತುಗಳಿಗೆ ಒಳಪಟ್ಟು [illegible] ಆದೇಶಿಸಲಾಗಿದೆ :-

Wind Section
Inward No. 13978
Date 17.9.13

## SHEDULE

| Topo Sheet No. | Proposed Enhaced capacity in MW | Near by villages of the proposed area Taluk and District. | Geographical area description of the project |
|---|---|---|---|
| 47 P/5 | 160 MW<br>(80 Nos x 2000 KW) | Kakmari, Kilardoddi, Telsang, Aigali, Ramtirth, Phadatarwadi and Bannur Villages in Athni Taluk, Belgaum District. | It is a non-plain area, highly varied in its elevation has strong presence of stony waste, plantation and streams. The entire area is situated on the south and west of Kakmari and Telsang villages. The elevation vary from 600 to 676. The area is held in the following Geographical co-ordinates:<br>**Latitude**:16°45'0''- 16°52'4''N<br>**Longitude**:75°15'0''-75°23'56''E<br>**Peaks:** 630, 654, 620, 630, 640, 673, 650, 676 and 668 m Amsl |
| Total | 160 MW | | |

1. ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ 18.7.2011ರಲ್ಲಿ ನಿಗದಿಪಡಿಸಿರುವ (ಈ ಯೋಜನಾ ಅವಧಿಯನ್ನು ತತ್ವತಃ ಅನುಮೋದನೆ ನೀಡಿದ ದಿನಾಂಕ: 22.9.2012ರಿಂದ ಪರಿಗಣಿಸಿ) ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.

3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಘನಕ್ಕೆ ಮತ್ತು ವಿಂಡ್ ಫಾರ್ಮ್‌ನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

| ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ | 5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ | ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ |
|---|---|---|
| - 200 ಕಿ.ವ್ಯಾ. ನಿಂದ 300 ಕಿ.ವ್ಯಾ. | 18 | 1 |
| - 300 ಕಿ.ವ್ಯಾ. ನಿಂದ 500 ಕಿ.ವ್ಯಾ. | 18 | 1 |
| - 500 ಕಿ.ವ್ಯಾ. ನಿಂದ 750 ಕಿ.ವ್ಯಾ. | 12 | 1 |
| - 750 ಕಿ.ವ್ಯಾ. ನಿಂದ 1000 ಕಿ.ವ್ಯಾ. | 8 ರಿಂದ 10 | 1 |

5. ಯೋಜನೆಯ ವಿವಿಧ ಹಂತದ ಬೆಳವಣಿಗೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

7. ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನೀತಿ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ / ವೀಲಿಂಗ್ ಮತ್ತು ಬ್ಯಾಂಕಿಂಗನ್ನು 3ನೇ ವ್ಯಕ್ತಿಯೊಂದಿಗೆ ಮಾಡಿಕೊಳ್ಳತಕ್ಕದ್ದು.

8. ಸರ್ಕಾರಿ ಆದೇಶ ಸಂ:ಇಎನ್ 95 ಇಬಿಎಸ್ 2009 ದಿ:29.12.2009ರನ್ವಯ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು.

9. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

11. ಸದರಿ ಆದೇಶವನ್ನು ರದ್ದುಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

ಪ್ರತಿ:
1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಬೆಂಗಳೂರು-1.
7. ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
8. ಉಪ ಅರಣ್ಯ ಸಂರಕ್ಷಣಾಧಿಕಾರಿ ಬೆಳಗಾವಿ ಜಿಲ್ಲೆ, ಬೆಳಗಾವಿ.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
11. ಮೆ: [illegible] ಲಿಮಿಟೆಡ್, C1-001, Tower C, Ground Floor, The Millenia, No.1 & 2, Murphy Road, ಅಲಸೂರು, ಬೆಂಗಳೂರು-560 008.
12. ರಕ್ಷಾ ಕಡತ / ಕಛೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.